## ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 271 (222) |
| 2. | ಸದಸ್ಯರ ಹೆಸರು | : | ಶ್ರೀ ಬಸನಗೌಡ ಬಾದರ್ಲಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3. | ಉತ್ತರಿಸುವ ಸಚಿವರು | : | ಮಾನ್ಯ ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |
| 4 | ಉತ್ತರಿಸುವ ದಿನಾಂಕ | : | 06.03.2025 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಸಿಂಧನೂರು ತಾಲ್ಲೂಕಿಗೆ ಕಾನೂನು ಕಾಲೇಜು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ: | ಸಿಂಧನೂರು ತಾಲ್ಲೂಕಿನಲ್ಲಿ ಸಂಕೇತ ಕಾನೂನು ಮಹಾವಿದ್ಯಾಲಯವನ್ನು 3 ವರ್ಷದ ಎಲ್.ಎಲ್.ಬಿ. ಕೋರ್ಸ್‌ನೊಂದಿಗೆ ಹೊಸದಾಗಿ ಪ್ರಾರಂಭಿಸಲು ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯವು ದಿನಾಂಕ: 08.12.2022 ರಂದು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತದೆ. |
| ಆ | ಇದ್ದಲ್ಲಿ ಯಾವ ಕಾಲಮಿತಿಯೊಳಗೆ ಮಂಜೂರು ಮಾಡಲು ಕ್ರಮಕೈಗೊಳ್ಳಲಾಗುವುದು? | ಸರ್ಕಾರದ ಪತ್ರ ಸಂಖ್ಯೆ: ಲಾ-ಕೆಎಲ್ಎಂ/139/2022 ದಿನಾಂಕ: 15.02.2024 ರನ್ವಯ ಸಿಂಧನೂರು ತಾಲ್ಲೂಕಿನಲ್ಲಿ ಸಂಕೇತ ಕಾನೂನು ಮಹಾವಿದ್ಯಾಲಯವನ್ನು 3 ವರ್ಷದ ಎಲ್.ಎಲ್.ಬಿ. ಕೋರ್ಸ್‌ನೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡಲಾಗಿದೆ. (ಅನುಬಂಧದಲ್ಲಿ ಲಗತ್ತಿಸಿದೆ). |

ಸಂ: ಲಾ ಹೆಚ್‌ಆರ್‌ಎಮ್/22/2025

(ಹೆಚ್.ಕೆ. ಪಾಟೀಲ)
ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು, ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು

# ಕರ್ನಾಟಕ ಸರ್ಕಾರ

ಸಂಖ್ಯೆ: ಲಾ-ಕೆಎಲ್ಎಮ್ /139/2022

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ,
ಬೆಂಗಳೂರು, ದಿನಾಂಕ: 15.02.2024

**ಇವರಿಂದ**:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ,
ವಿಧಾನ ಸೌಧ, ಬೆಂಗಳೂರು-560001.

**ಇವರಿಗೆ:**
ಕುಲಸಚಿವರು,
ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ,
ನವನಗರ, ಹುಬ್ಬಳ್ಳಿ-580025.

Inwd
550
15/2/24

**ಮಾನ್ಯರೇ**

**ವಿಷಯ:** 2022-23ನೇ ಸಾಲಿನಿಂದ "ಸಂಕೇತ ಕಾನೂನು ಮಹಾವಿದ್ಯಾಲಯ, ಸಿಂಧನೂರು" ಈ ಹೊಸ ಕಾನೂನು ಮಹಾವಿದ್ಯಾಲಯವನ್ನು 3 ವರ್ಷದ ಎಲ್ಎಲ್.ಬಿ ಕೋರ್ಸ್‌ನೊಂದಿಗೆ ಹೊಸದಾಗಿ ಪ್ರಾರಂಭಿಸಲು ಅನುಮೋದನೆ ನೀಡುವ ಕುರಿತು.

**ಉಲ್ಲೇಖ:**
1. ಪತ್ರ ಸಂಖ್ಯೆ: ಕರಾಕಾವಿ/ವಿಮ/ಸಂ/2022-23/1608, ದಿನಾಂಕ: 08.12.2022.
2. ಪತ್ರ ಸಂಖ್ಯೆ: ಕರಾಕಾವಿ/ವಿಮ/ಸಂ/2022-23/098, ದಿನಾಂಕ: 17.04.2023.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರಗಳಲ್ಲಿನ ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ (ತಿದ್ದುಪಡಿ) ಅಧಿನಿಯಮ, 2016ರ ಕಲಂ 58ನೇ ಪ್ರಕರಣದ (5)ನೇ ಉಪಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಸಂಕೇತ ಕಾನೂನು ಕಾಲೇಜು, ಆದರ್ಶ ಕಾಲೋನಿ, ಸಿಂಧನೂರು-584128, ಈ ಹೊಸ ಕಾನೂನು ಮಹಾವಿದ್ಯಾಲಯವನ್ನು 3 ವರ್ಷದ ಎಲ್ಎಲ್.ಬಿ ಕೋರ್ಸ್‌ನೊಂದಿಗೆ (60 ವಿದ್ಯಾರ್ಥಿಗಳನ್ನೊಳಗೊಂಡ 1 ವಿಭಾಗಕ್ಕೆ) ಹೊಸದಾಗಿ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು, ಸರ್ಕಾರವು ಅನುಮೋದನೆ ನೀಡಿದೆ ಎಂದು ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

CAC
17.02.2024

**ಷರತ್ತುಗಳು:-**

1. ಯಾವುದೇ ರೂಪದ ಕ್ಯಾಪಿಟೇಷನ್ ಶುಲ್ಕವನ್ನು ಪಡೆಯತಕ್ಕದ್ದಲ್ಲ.

2251
17/2/24

2. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಮೇಲ್ಕಂಡ ಕಾಲೇಜಿನ 3 ವರ್ಷದ ಎಲ್ಎಲ್.ಬಿ. ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸು ಎಂದು ಪರಿಗಣಿಸತಕ್ಕದ್ದು.

3. ಮೇಲ್ಕಂಡ ಕಾಲೇಜು ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ, ಬಾರ್ ಕೌನ್ಸಿಲ್ ಆಫ್ ಇಂಡಿಯಾದ ಹಾಗೂ ಸರ್ಕಾರದ ನಿಯಮಾವಳಿಗಳ ಉಪಬಂಧಗಳನ್ನು ಕಾಲಕಾಲಕ್ಕೆ ತಪ್ಪದೇ ಪಾಲಿಸತಕ್ಕದ್ದು.

4. ವಿದ್ಯಾರ್ಥಿಗಳ ಪ್ರವೇಶಾತಿಯು ಕಡ್ಡಾಯವಾಗಿ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಮತ್ತು ಬಾರ್ ಕೌನ್ಸಿಲ್ ಆಫ್ ಇಂಡಿಯಾದ ನಿಯಮಗಳಿಗನುಗುಣವಾಗಿರತಕ್ಕದ್ದು.

5. ಕಾಲೇಜಿನ ಪ್ರಾಂಶುಪಾಲರು ಹಾಗೂ ಬೋಧಕ ಸಿಬ್ಬಂದಿಗಳು ಕಾನೂನು ವಿಷಯದಲ್ಲಿ ಬಾರ್ ಕೌನ್ಸಿಲ್ ಆಫ್ ಇಂಡಿಯಾದವರು ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿರತಕ್ಕದ್ದು. ಬಾರ್ ಕೌನ್ಸಿಲ್ ಆಫ್ ಇಂಡಿಯಾದ ನಿಯಮಗಳ ನಿಯಮ 14 (1), (2) and (3) (Rules of Legal Education, Chapter III of Part IV) ರನ್ವಯ ಬಾರ್ ಕೌನ್ಸಿಲ್ ಆಫ್ ಇಂಡಿಯಾದ ಪೂರ್ವಾನುಮತಿ ಪಡೆಯದೇ ವಿದ್ಯಾರ್ಥಿಗಳ ಪ್ರವೇಶಾತಿ ಮಾಡತಕ್ಕದ್ದಲ್ಲ ಹಾಗೂ ಕಾನೂನು ಶಿಕ್ಷಣವನ್ನು ನೀಡತಕ್ಕದ್ದಲ್ಲ.

6. ವಿದ್ಯಾರ್ಥಿಗಳ ಪ್ರವೇಶಾತಿಗೆ ಮೊದಲು, ಬಾರ್ ಕೌನ್ಸಿಲ್ ಆಫ್ ಇಂಡಿಯಾದ ಅನುಮತಿ ಪತ್ರದ ಪ್ರತಿಯನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ ಮತ್ತು ಕುಲಸಚಿವರು, ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ, ಹುಬ್ಬಳ್ಳಿ ಇವರಿಗೆ ಕಳುಹಿಸತಕ್ಕದ್ದು. ಯಾವುದೇ ರೀತಿಯ ವಿಚಲನವನ್ನು ಗಂಭೀರವಾಗಿ ಪರಿಗಣಿಸಲಾಗುವುದು ಮತ್ತು ಕಾಲೇಜಿಗೆ ನೀಡಿರುವ ಅನುಮತಿಯನ್ನು ಏಕಪಕ್ಷೀಯವಾಗಿ ರದ್ದುಗೊಳಿಸಲು ಸರ್ಕಾರವು ಹಕ್ಕನ್ನು ಉಳಿಸಿಕೊಂಡಿರುತ್ತದೆ.

7. ಕಾಲೇಜಿನ ವಿದ್ಯಾರ್ಥಿಗಳ / ಶಿಕ್ಷಕರ/ಇತರ ನೌಕರರ ಹಿತಾಸಕ್ತಿಯ ದೃಷ್ಟಿಯಿಂದ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯವು ಕಾಲಕಾಲಕ್ಕೆ ಹೊರಡಿಸುವ ಶಾಸನಗಳು /ನಿಯಮಗಳು / ಅಧಿನಿಯಮಗಳು ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು ಯಾವುದೇ ಸಂದರ್ಭಗಳಲ್ಲಿ ಅರ್ಹತಾ ಮಾನದಂಡವನ್ನು ಉಲ್ಲಂಘಿಸತಕ್ಕದ್ದಲ್ಲ ಅಥವಾ ವಿಶ್ವವಿದ್ಯಾಲಯವು ಸಂಯೋಜನಾ ಆದೇಶದಲ್ಲಿ ನಿಗದಿಪಡಿಸುವ ವಿದ್ಯಾರ್ಥಿಗಳ ಪ್ರವೇಶಾತಿ ಸಂಖ್ಯೆಯನ್ನು ಮೀರತಕ್ಕದ್ದಲ್ಲ ಮತ್ತು ಸ್ಥಳೀಯ ವಿಚಾರಣಾ ಸಮಿತಿಯು ವಿಧಿಸುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

8. The Sexual Harassment of Women at Workplace (Prevention, Prohibition and Redressal) Act, 2013 ರನ್ವಯ ಯಾವುದೇ ವ್ಯಕ್ತಿ / ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು. ಮತ್ತು ಆ ವ್ಯಕ್ತಿ / ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು. ಮುಂದುವರೆದು, ಕಾಲೇಜು / ಆಡಳಿತ ಮಂಡಳಿಯು ಸದರಿ ಅಧಿನಿಯಮದನ್ವಯ ಒಂದು ದೂರು ಸಮಿತಿಯನ್ನು ರಚಿಸಿ, ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು.

..3

9. ಕಾಲೇಜು ವಿದ್ಯಾರ್ಥಿಗಳ ಬೆಳವಣಿಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು. ಕಾಲೇಜಿನ ಪ್ರಾಂಶುಪಾಲರು / ಆಡಳಿತ ಮಂಡಳಿಯು ವಿದ್ಯಾರ್ಥಿ / ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.

10. ಕಾಲೇಜಿನ ಆಡಳಿತ ಮಂಡಳಿಯು ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ / ವರ್ಗಾವಣೆ ಪ್ರಮಾಣ ಪತ್ರ ಮತ್ತು ಇತರೆ ದಾಖಲಾತಿಗಳನ್ನು ಅನಾವಶ್ಯಕವಾಗಿ ತಡೆಹಿಡಿಯತಕ್ಕದ್ದಲ್ಲ ಹಾಗೂ ವಿಶ್ವವಿದ್ಯಾಲಯವು ನಿಗದಿಪಡಿಸಿರುವ ಶುಲ್ಕವನ್ನು ಹೊರತುಪಡಿಸಿ ಯಾವುದೇ ಅಧಿಕ ಶುಲ್ಕವನ್ನು ವಿದ್ಯಾರ್ಥಿಗಳಿಂದ ಪಡೆಯತಕ್ಕದ್ದಲ್ಲ.

11. ಈ ಕಾಲೇಜು ಬಾರ್ ಕೌನ್ಸಿಲ್ ಆಫ್ ಇಂಡಿಯಾದ ಅನುಮೋದನೆ ಪಡೆಯುವ ಮೊದಲು ಯಾವುದೇ ಭವಿಷ್ಯದ ಅವಶ್ಯಕತೆಗಳಿಗೆ ಹಾಗೂ ಕಾಲೇಜಿನ ಅಭಿವೃದ್ಧಿಗಾಗಿ ಬ್ಯಾಂಕ್ ಖಾತೆಯಲ್ಲಿ ಹತ್ತು ಲಕ್ಷ ರೂಪಾಯಿಗಳ ಕನಿಷ್ಠ ಬಂಡವಾಳ ನಿಧಿಯನ್ನು ಹೊಂದಿರತಕ್ಕದ್ದು. ಈ ಖಾತೆಯನ್ನು ಕಾಲೇಜಿನ ಪ್ರಾಂಶುಪಾಲರು ಹಾಗೂ ವಿಶ್ವವಿದ್ಯಾಲಯದ ಕುಲಸಚಿವರು ಅಥವಾ ಅವರ ಅಧಿಕೃತ ಏಜೆಂಟ್ ಜಂಟಿಯಾಗಿ ನಿರ್ವಹಿಸಬೇಕು.

12. ವಿದ್ಯಾರ್ಥಿಗಳ ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ ) ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

13. ಕಾಲೇಜಿನಲ್ಲಿ ಉಲ್ಬಣವಾಗುವ ರ್‍ಯಾಗಿಂಗ್ ಪಿಡುಗನ್ನು ತಪ್ಪಿಸಲು ಮಾನ್ಯ ಸರ್ವೋಚ್ಚ ನ್ಯಾಯಾಲಯ, ವಿಶ್ವವಿದ್ಯಾಲಯ ಅನುದಾನ ಆಯೋಗ, ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯ, ಕರ್ನಾಟಕ ಸರ್ಕಾರ ಹಾಗೂ ಇತರರು ಹೊರಡಿಸುವ ಎಲ್ಲಾ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸತಕ್ಕದ್ದು.

ಈ ಪತ್ರವು ಸ್ವೀಕೃತವಾದ ಎಂಟು ದಿನಗಳೊಳಗಾಗಿ ಮೇಲೆ ತಿಳಿಸಿದ ಷರತ್ತುಗಳನ್ನು ಉಲ್ಲೇಖಿಸಿ ಅಗತ್ಯ ಅಧಿಸೂಚನೆಯನ್ನು ಹೊರಡಿಸುವಂತೆ ಕೋರಲಾಗಿದೆ.

ತಮ್ಮ ನಂಬುಗೆಯ

B.Soni
(ಸೋನಿಕಾ)
ಸರ್ಕಾರದ ಅಧೀನ ಕಾರ್ಯದರ್ಶಿ
ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ
ಇಲಾಖೆ (ಮಾನವ ಹಕ್ಕುಗಳು).
5/2/24